# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 125 (122) |
| ವಿಧಾನ ಪರಿಷತ್ತಿನ ಸದಸ್ಯರು | : | ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | : | ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು |
| ಉತ್ತರಿಸುವ ದಿನಾಂಕ | : | 05.12.2023 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಬರಗಾಲ ಪರಿಸ್ಥಿತಿಯ ಅನುಗುಣವಾಗಿ ಉತ್ತರ ಕರ್ನಾಟಕದ ನಾಗರೀಕರ ನಿರುದ್ಯೋಗ ಸಮಸ್ಯೆಯನ್ನು ಪರಿಹರಿಸಲು ಸರ್ಕಾರದಿಂದ ಉತ್ತರ ಕರ್ನಾಟಕಕ್ಕೆ ಹೊಸ ಕೈಗಾರಿಕೆಗಳನ್ನು ಸ್ಥಾಪಿಸಲು ಯಾವುದಾದರೂ ಯೋಜನೆಯನ್ನು ರೂಪಿಸಲಾಗಿದೆಯೇ; (ಹಾಗಿದ್ದಲ್ಲಿ, ಯೋಜನೆಯ ವಿವರಗಳನ್ನು ನೀಡುವುದು) | ನಿರುದ್ಯೋಗ ನಿವಾರಣೆಗಾಗಿ ಇಲಾಖೆಯು ನಿರುದ್ಯೋಗಿ ಯುವಕ ಯುವತಿಯರಿಗೆ ಪಿಎಂಇಜಿಪಿ ಯೋಜನೆಯಡಿ ಸಾಲ ಹಾಗೂ ಹೊಸ ಕೈಗಾರಿಕೆಗಳನ್ನು ಸ್ಥಾಪಿಸಲು ಕೈಗಾರಿಕಾ ನೀತಿ 2020-25 ರನ್ವಯ ಈ ಕೆಳಕಂಡ ಪ್ರೋತ್ಸಾಹ ಹಾಗೂ ವಿನಾಯಿತಿಗಳನ್ನು ನೀಡಲಾಗುತ್ತಿದೆ.<br>1. ಬಂಡವಾಳ ಹೂಡಿಕೆ ಸಹಾಯಧನ/ ವಹಿವಾಟು ಆಧಾರಿತ ಸಹಾಯಧನ<br>2. ಮುದ್ರಾಂಕ ಶುಲ್ಕ ವಿನಾಯಿತಿ ಮತ್ತು ನೋಂದಣಿ ಶುಲ್ಕದಲ್ಲಿ ರಿಯಾಯಿತಿ<br>3. ಭೂ ಪರಿವರ್ತನೆ ಶುಲ್ಕದ ಮರುಪಾವತಿ<br>4. ತ್ಯಾಜ್ಯ ಸಂಸ್ಕರಣಾ ಘಟಕ ಸ್ಥಾಪಿಸಲು ಸಹಾಯಧನ (ಇಟಿಪಿ)<br>5. ತಂತ್ರಜ್ಞಾನ ಅಳವಡಿಕೆ ಹಾಗೂ ನವೋನ್ವೇಶಣೆ ಉತ್ತೇಜನ<br>6. ವಿದ್ಯುತ್ ಶುಲ್ಕದ ಮೇಲಿನ ತೆರಿಗೆ ವಿನಾಯಿತಿ<br>7. ವಿದ್ಯುಚ್ಛಕ್ತಿ ಸಹಾಯಧನ<br>8. ಆಂಕರ್ ಘಟಕ ಸಹಾಯಧನ<br>ಉತ್ಪಾದನಾ ಕ್ಲಸ್ಟರ್‌ನ್ನು ವಿಜಯಪುರ ಜಿಲ್ಲೆಯ ಮುಳವಾಡ ಕೈಗಾರಿಕಾ ಪ್ರದೇಶದಲ್ಲಿ ಸ್ಥಾಪಿಸಲಾಗುತ್ತಿದೆ. |
| ಆ | ಕರ್ನಾಟಕ ನೆರೆ ರಾಜ್ಯಗಳಾದ ಮಹಾರಾಷ್ಟ್ರ, ಆಂಧ್ರಪ್ರದೇಶ, ತಮಿಳುನಾಡು ಮತ್ತು ತೆಲಂಗಾಣ ರಾಜ್ಯಗಳಲ್ಲಿ ಅಧಿಕ ಸಂಖ್ಯೆಯಲ್ಲಿ ಕೈಗಾರಿಕೆಗಳಿದ್ದು ಅವುಗಳಿಗೆ ಸ್ಪರ್ಧಾತ್ಮಕವಾಗಿ ಕರ್ನಾಟಕದಲ್ಲಿ ಅಧಿಕ ಸಂಖ್ಯೆ ಕೈಗಾರಿಕೆಗಳನ್ನು ಸ್ಥಾಪಿಸಲು ಯಾವ ಕಾರ್ಯಕ್ರಮಗಳನ್ನು ಸರ್ಕಾರದ ವತಿಯಿಂದ ಹಮ್ಮಿಕೊಳ್ಳಲಾಗಿದೆ; ಯಾವ ಜಿಲ್ಲೆಗಳಲ್ಲಿ ಯಾವ ಕೈಗಾರಿಕೆಗಳನ್ನು ಸ್ಥಾಪಿಸಲು ಉದ್ದೇಶಿಸಲಾಗಿದೆ? (ಮಾಹಿತಿ ನೀಡುವುದು) | ಕರ್ನಾಟಕ ರಾಜ್ಯದಲ್ಲಿ ಹೆಚ್ಚಿನ ಕೈಗಾರಿಕೆಗಳನ್ನು ಆಕರ್ಷಿಸಲು ಕೈಗಾರಿಕಾ ನೀತಿ 2020-25, ಕರ್ನಾಟಕ ಏರೋಸ್ಪೇಸ್ & ಡಿಫೆನ್ಸ್ ನೀತಿ 2022-27 ಹಾಗೂ ಎಲೆಕ್ಟ್ರಿಕ್ ವೆಹಿಕಲ್ ಪಾಲಿಸಿ ಗಳನ್ನು ಜಾರಿಗೆ ತಂದಿದ್ದು, ರಾಜ್ಯದಲ್ಲಿ ಈ ನೀತಿಗಳನ್ವಯ ರಿಯಾಯಿತಿ & ಪ್ರೋತ್ಸಾಹಗಳನ್ನು ನೀಡಲಾಗುತ್ತಿದೆ.<br>ಕರ್ನಾಟಕ ರಾಜ್ಯಕ್ಕೆ ಹೆಚ್ಚಿನ ಬಂಡವಾಳ ಆಕರ್ಷಿಸಲು ವಿವಿಧ ಜಿಲ್ಲೆಗಳಲ್ಲಿ ಈ ಕೆಳಕಂಡ ಕ್ಲಸ್ಟರ್/ಕೈಗಾರಿಕಾ ಪ್ರದೇಶಗಳನ್ನು ಅಭಿವೃದ್ಧಿಪಡಿಸಲಾಗಿದೆ.<br>1. ಫಾರ್ಮ್ ಕ್ಲಸ್ಟರ್, ಕಡೇಚೂರ್ ಕೈಗಾರಿಕಾ ಪ್ರದೇಶ, ಯಾದಗಿರಿ ಜಿಲ್ಲೆ. |

| | | |
|---|---|---|
| | | 2. FMCG ಕ್ಲಸ್ಟರ್, ಮಮ್ಮಿಗಟ್ಟಿ ಕೈಗಾರಿಕಾ ಪ್ರದೇಶ, ಧಾರವಾಡ ಜಿಲ್ಲೆ.<br>3. ಕನ್‌ಸ್ಯೂಮರ್ ಡ್ಯೂರೆಬಲ್ ಕ್ಲಸ್ಟರ್, ಧಾರವಾಡ ಜಿಲ್ಲೆ.<br>4. ಇಎಸ್‌ಡಿಎಂ ಕ್ಲಸ್ಟರ್, ಕೋಚನಹಳ್ಳಿ ಕೈಗಾರಿಕಾ ಪ್ರದೇಶ, ಮೈಸೂರು ಜಿಲ್ಲೆ.<br>5. ಬದನಗುಪ್ಪೆ ಕೆಳ್ಳಂಬಳ್ಳಿ ಕೈಗಾರಿಕಾ ಪ್ರದೇಶ, ಚಾಮರಾಜನಗರ ಜಿಲ್ಲೆ.<br>6. ಕೊಪ್ಪಳ ಟಾಯ್ಸ್ ಕ್ಲಸ್ಟರ್.<br>7. ಬಳ್ಳಾರಿ ಜಿಲ್ಲೆಯಲ್ಲಿ ಜವಳಿ ಕ್ಲಸ್ಟರ್.<br>8. ಬೀದರ್ ಜಿಲ್ಲೆಯಲ್ಲಿ ಕೃಷಿ ಉಪಕರಣಗಳ ಕ್ಲಸ್ಟರ್ |

ಸಿಐ 312 ಎಸ್‌ಪಿಐ 2023

(ಎಂ.ಬಿ. ಪಾಟೀಲ)
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ ಸಚಿವರು